# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 1521 |
| **ಸದಸ್ಯರ ಹೆಸರು** | : | ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸುವ ದಿನಾಂಕ** | : | 21.03.2025 |
| **ಉತ್ತರಿಸುವ ಸಚಿವರು** | : | ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕನ್ನಡಕ್ಕೆ ಶಾಸ್ತ್ರೀಯ ಭಾಷಾ ಸ್ಥಾನಮಾನ ದೊರೆತು ಎಷ್ಟು ವರ್ಷಗಳಾಗಿವೆ; ಆ ಬಳಿಕ ಸ್ಥಾಪನೆಯಾಗಿರುವ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ಸ್ವಾಯತ್ತತೆಯನ್ನು ನೀಡಲಾಗಿದೆಯೇ; ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ಸ್ವಂತ ಜಾಗ ಮತ್ತು ಕಟ್ಟಡ ಒದಗಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಸ್ವಂತ ಜಾಗ ಮತ್ತು ಕಟ್ಟಡ ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಕನ್ನಡಕ್ಕೆ ಶಾಸ್ತ್ರೀಯ ಭಾಷಾ ಸ್ಥಾನಮಾನ ದೊರೆತು 17 ವರ್ಷಗಳಾಗಿವೆ(31.10.2008);<br><br>ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ಸ್ವಾಯತ್ತತೆಯನ್ನು ನೀಡಿರುವುದಿಲ್ಲ.<br><br>ಮೈಸೂರು ವಿಶ್ವವಿದ್ಯಾಲಯದ ಸಿಂಡಿಕೇಟ್ ಸಭೆಯಲ್ಲಿ ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ 4.2 ಎಕರೆ ಸ್ಥಳವನ್ನು ನೀಡಲು ತೀರ್ಮಾನಿಸಲಾಗಿತ್ತು. ಆದರೆ 4.2 ಎಕರೆ ಸ್ಥಳದ ಬದಲಾಗಿ "ಜಯಲಕ್ಷ್ಮೀ ವಿಲಾಸ ಅರಮನೆ" ಕಟ್ಟಡದಲ್ಲಿ ಆರಂಭಿಸಲು ಮೈಸೂರು ವಿಶ್ವವಿದ್ಯಾಲಯದ ಕುಲಸಚಿವರು ಮತ್ತು ಸಹಾಯಕ ನಿರ್ದೇಶಕರು ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮೈಸೂರು (ಸರ್ಕಾರದ ಪರವಾಗಿ) ದಿನಾಂಕ: 21.02.2023ರಂದು ಒಡಂಬಡಿಕೆ ಮಾಡಿಕೊಳ್ಳಲಾಗಿದೆ. ಪ್ರಸ್ತುತ ಸದರಿ ಕಟ್ಟಡದ ನವೀಕರಣ ಕಾಮಗಾರಿಯನ್ನು ಮೈಸೂರು ವಿಶ್ವವಿದ್ಯಾಲಯದಿಂದ ಕೈಗೊಳ್ಳಲಾಗಿರುತ್ತದೆ. |
| ಆ) | ಕನ್ನಡ ಭಾಷೆ ಅಭಿವೃದ್ಧಿಗೆ ಪೂರಕವಾದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನವೆಷ್ಟು? (ವರ್ಷವಾರು ವಿವರ ನೀಡುವುದು) | ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರಕ್ಕೆ ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ ಬಿಡುಗಡೆಯಾಗಿರುವ ಅನುದಾನದ ವಿವರ ಈ ಕೆಳಕಂಡಂತಿದೆ. |

| ಹಣಕಾಸು ವರ್ಷ | ಅನುದಾನದ ಮೊತ್ತ (ರೂ.ಗಳಲ್ಲಿ) |
|---|---|
| 2011-12 | 54,54,000 |
| 2012-13 | 2,18,16,000 |
| 2013-14 | 31,41,000 |
| 2014-15 | 1,00,00,000 |
| 2015-16 | 1,00,00,000 |
| 2016-17 | 1,00,00,000 |
| 2017-18 | 1,00,00,000 |
| 2018-19 | 99,00,000 |
| 2019-20 | 1,07,00,000 |
| 2020-21 | 1,27,50,000 |
| 2021-22 | 1,06,50,000 |
| 2022-23 | 1,71,75,000 |
| 2023-24 | 1,54,50,000 |
| 2024-25 | 86,00,000 |

**ಸಂಖ್ಯೆ**.ಕಸಂವಾ 37 ಕೆಓಎಲ್ ಆಕ 2025

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು